ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕಳಸಾ ನಾಲಾ ತಿರುವು ಯೋಜನೆಯ ರೂ. 885.80 ಕೋಟಿ ಮೊತ್ತದ ಪರಿಷ್ಕೃತ ವಿವರವಾದ ಯೋಜನಾ ವರದಿಗೆ ತಾತ್ವಿಕ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ:ನೀಇ 57 ವಿಬ್ಯಾತ 2000, ದಿನಾಂಕ:22.08.2000
2) ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿರವರ ಪತ್ರ ಸಂಖ್ಯೆ:ಕನೀನಿನಿ/ಕಳಸಾ ನಾಲಾ ಯೋಜನೆ/ಡಿಪಿಆರ್/2019-20/1883, ದಿನಾಂಕ:12.07.2019.
3) ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿರವರ ಪತ್ರ ಸಂಖ್ಯೆ: ಕನೀನಿನಿ/ ಕಳಸಾ ನಾಲಾ ಯೋಜನೆ/ಡಿಪಿಆರ್/2019-20/2619, ದಿನಾಂಕ:22.08.2019.

****

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನಲ್ಲಿರುವ ಮಲಪ್ರಭಾ ನೀರಾವರಿ ಯೋಜನೆಯ ಪೂರಕ ಯೋಜನೆಯಾದ 'ಕಳಸಾ' ನಾಲಾ ತಿರುವು ಯೋಜನೆಯಿಂದ ಹೆಚ್ಚುವರಿ ನೀರನ್ನು ಒದಗಿಸಲು ರೂ.44.78 ಕೋಟಿಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

2. ಮೇಲೆ ಓದಲಾದ (2)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನ ಕನಕುಂಬಿ ಗ್ರಾಮದ ಬಳಿ ಕಳಸಾ ನಾಲಾ ಮತ್ತು ಹಲತಾರ ನಾಲಾಗಳ ಮೇಲೆ ಅಣೆಕಟ್ಟು ನಿರ್ಮಿಸಿ ಕೂಡು ಕಾಲುವೆಯ ಮುಖಾಂತರ ಕುಡಿಯುವ ನೀರಿನ ಉದ್ದೇಶಕ್ಕಾಗಿ ನೀರನ್ನು ತಿರುವುಗೊಳಿಸಲು ಕಳಸಾ ನಾಲಾ ತಿರುವು ಯೋಜನೆಯನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ ಎಂದು ಹಾಗೂ ಮಹಾದಾಯಿ ಜಲ ವಿವಾದ ನ್ಯಾಯಾಧೀಕರಣವು ದಿನಾಂಕ:14/08/2018ರಂದು ತೀರ್ಪನ್ನು ನೀಡಿ, ಕರ್ನಾಟಕ ರಾಜ್ಯಕ್ಕೆ 13.42 ಟಿ.ಎಂ.ಸಿ. ನೀರನ್ನು ಹಂಚಿಕೆ ಮಾಡಲಾಗಿದ್ದು, ಈ ಪೈಕಿ ಕಳಸಾ ನಾಲಾ ತಿರುವು ಯೋಜನೆಗೆ 1.72 ಟಿ.ಎಂ.ಸಿ. ನೀರನ್ನು ಹಂಚಿಕೆ ಮಾಡಲಾಗಿದೆ ಎಂದು ವರದಿ ಮಾಡಿರುತ್ತಾರೆ.

3. ದಿನಾಂಕ:30/04/2019ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮ ನಿಯಮಿತದ ಅಂದಾಜು ಪರಿಶೀಲನಾ ಸಮಿತಿಯ 52ನೇ ಸಭೆಯಲ್ಲಿ ಸದರಿ ಯೋಜನೆಯ ಪರಿಷ್ಕೃತ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆಗಾಗಿ ನಿಗಮದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಮಂಡಿಸಲು ಶಿಫಾರಸ್ಸು ಮಾಡಲಾಗಿದೆ ಎಂದು ಹಾಗೂ ದಿನಾಂಕ:09/07/2019ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 88ನೇ ಸಭೆಯಲ್ಲಿ ಕಾಮಗಾರಿ ಪ್ರಾರಂಭಿಸುವ ಮುನ್ನಾ ಕೇಂದ್ರ ಸರ್ಕಾರದ ಜಲ ಸಂಪನ್ಮೂಲ ಮಂತ್ರಾಲಯದ ಕೇಂದ್ರ ಜಲ ಆಯೋಗದ ಅನುಮೋದನೆ ಪಡೆಯುವ ಸಲುವಾಗಿ, ಸದರಿ ಯೋಜನೆಯ ರೂ.931.40 ಕೋಟಿಗಳ ಪರಿಷ್ಕೃತ ವಿವರವಾದ ಯೋಜನಾ ವರದಿಗೆ ಮಂಡಳಿಯು ಅನುಮೋದನೆ ನೀಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು ವರದಿ ಮಾಡಿರುತ್ತಾರೆ.

4. ಮೇಲೆ ಓದಲಾದ(3)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು ದಿನಾಂಕ:30/04/2019ರಂದು ಜರುಗಿದ ಅಂದಾಜು ಪರಿಶೀಲನಾ ಸಮಿತಿಯ 52ನೇ ಸಭೆಯಲ್ಲಿ ಶಿಫಾರಸ್ಸು ಮಾಡಿರುವ ಕಳಸಾ ನಾಲಾ ಯೋಜನೆಯ ರೂ.931.40 ಕೋಟಿ ಮೊತ್ತದ ವಿವರವಾದ ಯೋಜನಾ ವರದಿ ಪ್ರಸ್ತಾವನೆಯ ಕುರಿತಂತೆ, ಅಂದಿನ ಕನ್ನಾಟಕ ಮುಖ್ಯಮಂತ್ರಿಯವರ ತಾಂತ್ರಿಕ ಸಲಹೆಗಾರರ ಹಾಗೂ ನಿಗಮದ ವಿನ್ಯಾಸ ಶಾಖೆಯಲ್ಲಿ ವ್ಯಕ್ತಪಡಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪ್ರಸ್ತುತ ಮಾರ್ಪಾಡಿತ ಯೋಜನಾ ವರದಿಯ ಮೊತ್ತವು ರೂ.885.80 ಕೋಟಿಗಳಾಗಿದ್ದು, ಸದರಿ ಮೊತ್ತವು ಮಂಡಳಿ ಶಿಫಾರಸ್ಸು ಮಾಡಿರುವ ರೂ. 931.40 ಕೋಟಿ ಮೊತ್ತಕ್ಕಿಂತ ಕಡಿಮೆ ಇರುವುದಾಗಿ ವರದಿ ಮಾಡಿರುತ್ತಾರೆ.

.....2

5. ಮುಂದುವರೆದು, ಭಾರತ ಸರ್ಕಾರದ ಜಲಶಕ್ತಿ ಸಚಿವಾಲಯವು ದಿನಾಂಕ:27/02/2020ರಂದು ಮಹಾದಾಯಿ ಸ್ಥಾಯೀಕರಣದ ತೀರ್ಪಿಗೆ ಅನುಷ್ಠಾನ ಗೆಜೆಟ್ ಅಧಿಸೂಚನೆ (Extraordinary Gazette Notification) ಹೊರಡಿಸಿರುತ್ತದೆ. ಈ ಹಿನ್ನೆಲೆಯಲ್ಲಿ ಕಳಸಾ ನಾಲಾ ತಿರುವು ಯೋಜನೆಯ ರೂ.885.80 ಕೋಟಿ ಮೊತ್ತದ ಪರಿಷ್ಕೃತ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ:ಜಸಂಇ 14 ಎಂಪಿಜಿಎಸ್ 2019, ಬೆಂಗಳೂರು, ದಿನಾಂಕ: 10/07/2020

ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕಿನ ಕನಕುಂಬಿ ಗ್ರಾಮದ ಬಳಿ ಕಳಸಾ ನಾಲಾ ಮತ್ತು ಹಲತಾರ ನಾಲಾಗಳ ಮೇಲೆ ಅಣೆಕಟ್ಟು ನಿರ್ಮಿಸಿ ಕೂಡು ಕಾಲುವೆಯ ಮುಖಾಂತರ ಕುಡಿಯುವ ನೀರಿನ ಉದ್ದೇಶಕ್ಕಾಗಿ 1.72 ಟಿ.ಎಂ.ಸಿ. ನೀರನ್ನು ಮಲಪ್ರಭಾ ನದಿಗೆ ತಿರುಗಿಸುವ "ಕಳಸಾ ನಾಲಾ ತಿರುವು ಯೋಜನೆ" ಯ ರೂ.885.80 ಕೋಟಿ ಮೊತ್ತದ (ರೂಪಾಯಿ ಎಂಟುನೂರ ಎಂಬತ್ತೈದು ಕೋಟಿ ಎಂಬತ್ತು ಲಕ್ಷ ಮಾತ್ರ) ಪರಿಷ್ಕೃತ ವಿವರವಾದ ಯೋಜನಾ ವರದಿಗೆ ತಾತ್ವಿಕ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

2. ಸದರಿ ಯೋಜನೆಯ ಟೆಂಡರ್ ಪ್ರಕ್ರಿಯೆ ಕೈಗೊಳ್ಳುವ ಮೊದಲು ಆರ್ಥಿಕ ಇಲಾಖೆಯ ಪೂರ್ವಾನುಮೋದನೆ ಪಡೆಯತಕ್ಕದ್ದು.

3. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 67 ಆಕೋ-1/2019(ಇ-ಆಫೀಸ್), ದಿನಾಂಕ: 18.12.2019 ಮತ್ತು ದಿನಾಂಕ: 25/06/2020 ರಲ್ಲಿ ನೀಡಿರುವ ಸಹಮತಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿಎಸ್/ ಎಂಸಿಎಂ/3/2020-ಪಿಪಿಡಿ, ದಿನಾಂಕ:03/02/2020 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-5),
ಜಲಸಂಪನ್ಮೂಲ ಇಲಾಖೆ

(ರವೀಂದ್ರ ಕೊಂಡ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ.

ಪ್ರತಿಯನ್ನು:

1. ಮಹಾಲೇಖಪಾಲರು, (ಎ & ಇ)/(ಇ&ಆರ್‌ಎಸ್‌ಎ)/(ಜಿ&ಎಸ್‌ಎಸ್‌ಎ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಮಾನ್ಯ ಜಲ ಸಂಪನ್ಮೂಲ ಸಚಿವರ ವಿಶೇಷ ಕರ್ತವ್ಯಾಧಿಕಾರಿಗಳು, ವಿಧಾನ ಸೌಧ, ಬೆಂಗಳೂರು.
7. ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
9. ಮುಖ್ಯ ಇಂಜಿನಿಯರ್, ಮಲಪ್ರಭಾ ಯೋಜನಾ ವಲಯ, ಧಾರವಾಡ.
10. ಹೆಚ್ಚುವರಿ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
12. ಸರ್ಕಾರದ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
13. ವಿಶೇಷಾಧಿಕಾರಿಗಳು ಮತ್ತು ಪದನಿಮಿತ್ತ ಜಂಟಿ ಕಾರ್ಯದರ್ಶಿಗಳು (ಲೋಇ-ಎಕೋ), ಆರ್ಥಿಕ ಇಲಾಖೆ.
14. ಉಪ ಕಾರ್ಯದರ್ಶಿಗಳು (ಸಚಿವ ಸಂಪುಟ), ವಿಧಾನ ಸೌಧ, ಬೆಂಗಳೂರು (ಪ್ರಕರಣ ಸಂಖ್ಯೆ:ಸಿ-173/2020ರಂತೆ ಮಾಹಿತಿಗಾಗಿ)
15. ಸರ್ಕಾರದ ಉಪ ಕಾರ್ಯದರ್ಶಿಗಳು (ಕೃಭಾಜನಿ), ವಿಕಾಸ ಸೌಧ, ಬೆಂಗಳೂರು.
16. ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿಗಳು.

ಮುಖ್ಯ ಇಂಜಿನಿಯರರು ಖಾನಾಪುರ ಸಂಖ್ಯೆ: 744 ದಿನಾಂಕ: 27/7/2020